# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವರು

ವಿಶ್ವವಿದ್ಯಾಲಯ ಕಾರ್ಯಾಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ - 577451
ಶಿವಮೊಗ್ಗ ಜಿಲ್ಲೆ, ಕರ್ನಾಟಕ

ಸಂಖ್ಯೆ: ಕುವಿ/ಪ.ಜಾ:ಪ.ಪಂ.ಘ-2/ / 2023-24/ ದಿನಾಂಕ: 09-10-2023

## ಪ್ರಕಟಣೆ

**ವಿಷಯ: ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟಜಾತಿ : ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಕ್ಷೇತ್ರಕಾರ್ಯ (Project Work) ಕೈಗೊಳ್ಳಲು ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.**

************

2022-23ನೇ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾಲಯದ ಆವರಣ, ಸ್ನಾತಕೋತ್ತರ ಕೇಂದ್ರ ಹಾಗೂ ಘಟಕ ಕಾಲೇಜಿನ ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಪೋಷಕರ ಆದಾಯ ರೂ. 2.50 ಲಕ್ಷಗಳ ಮಿತಿಯೊಳಗಿದ್ದು ವಿದ್ಯಾರ್ಥಿವೇತನಕ್ಕೆ ಅರ್ಹರಿರುವ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ತಮ್ಮ ಅಧ್ಯಯನಕ್ಕೆ ಪೂರಕವಾದ ಕ್ಷೇತ್ರಕಾರ್ಯ (Project Work) ಕೈಗೊಳ್ಳಲು ಪ್ರತಿ ವಿದ್ಯಾರ್ಥಿಗೆ ತಲಾ **ರೂ. 2,000/-** ಗಳ (ರೂಪಾಯಿ **ಎರಡು ಸಾವಿರಗಳು** ಮಾತ್ರ) ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಆದ್ದರಿಂದ, ಸದರಿ ಸಹಾಯಧನವನ್ನು ಪಡೆಯಲು ಬಯಸುವ ವಿಭಾಗದ ವಿದ್ಯಾರ್ಥಿಗಳು ಕ್ಷೇತ್ರಕಾರ್ಯ ಕೈಗೊಂಡ ಬಗ್ಗೆ ಅರ್ಜಿ ಸಲ್ಲಿಸುವುದು. ನಿಗದಿತ ಅರ್ಜಿಯನ್ನು ಆನ್ ಲೈನ್ ಮೂಲಕ Google Format ನಲ್ಲಿ ಆಹ್ವಾನಿಸಲಾಗಿದೆ. ಅರ್ಹ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳು ಅರ್ಜಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲ ವಿಳಾಸ :- http://www.kuvempu.ac.in

↓

***SC/ST downloads*** ರಲ್ಲಿ

↓

***Google Format*** ನ ಮೂಲಕ

**(Google form Link** : https://forms.gle/TpGmLk2PR8XmK68v7)

ಅರ್ಜಿಗಳನ್ನು ಆನ್ ಲೈನ್ ಮೂಲಕವೇ ಭರ್ತಿ ಮಾಡಿ **ದಿನಾಂಕ: 27-10-2023** ರೊಳಗಾಗಿ ***Submit*** ಮಾಡಲು ತಿಳಿಸಲಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ/ ಪರಿಗಣಿಸಲಾಗುವುದಿಲ್ಲ.

ತಾವು ಭರ್ತಿ ಮಾಡಲಾದ ವಿವರವನ್ನು ಅರ್ಜಿ ರೂಪದಲ್ಲಿ ತಮ್ಮ ಇ-ಮೇಲ್ ವಿಳಾಸಕ್ಕೆ ಮರು ಸಲ್ಲಿಸಲಾಗುವುದು. ಸದರಿ ಅರ್ಜಿಯನ್ನು ಪರಿಶೀಲಿಸಿ, ಮುದ್ರಿಸಿಕೊಂಡ ನಂತರ ಅರ್ಜಿ ನಮೂನೆಯನ್ನು ಅಗತ್ಯ ದಾಖಲಾತಿಗಳೊಂದಿಗೆ ಆಯಾ ವಿಭಾಗಕ್ಕೆ ಸಲ್ಲಿಸುವುದು. ಆಯಾ ವಿಭಾಗದ ಮುಖ್ಯಸ್ಥರು ಸ್ವೀಕೃತವಾದ ಅರ್ಜಿಗಳನ್ನು ಕ್ರೋಢೀಕರಿಸಿ, ಕ್ಷೇತ್ರಕಾರ್ಯ ಕೈಗೊಂಡಿರುವ ಬಗ್ಗೆ ದೃಢೀಕರಣದೊಂದಿಗೆ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಘಟಕದ ಕಛೇರಿಗೆ **ದಿನಾಂಕ: 04-11-2023** ರೊಳಗಾಗಿ ಕಳುಹಿಸುವುದು.

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಶಂಕರಘಟ್ಟ - 577451
9/10/23

ಗೆ,

1) ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ
2) ಪ್ರಾಂಶುಪಾಲರು, ಸಹ್ಯಾದ್ರಿ ವಿಜ್ಞಾನ, ಕಲಾ ಹಾಗೂ ವಾಣಿಜ್ಯ ಕಾಲೇಜು, ಶಿವಮೊಗ್ಗ
3) ವಿಭಾಗದ ಮುಖ್ಯಸ್ಥರು, ಸ್ನಾತಕೋತ್ತರ ಕೇಂದ್ರ, ಕಡೂರು ಹಾಗೂ ಚಿಕ್ಕಮಗಳೂರು.

Scanned by Scanner Go